**Akashvani : Bangalore**
**Regional Bulletin In Kannada**
**18.03.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.03.2026 / 18.40 hrs**

***************

ಮುಖ್ಯಾಂಶಗಳು

೧. ಕೆಪಿಎಸ್‌ಸಿ ಹುದ್ದೆಗಳ ಆಯ್ಕೆ ಪ್ರಕ್ರಿಯೆಯಲ್ಲಿನ ಆರೋಪಗಳು ಆಧಾರ ರಹಿತ - ವಿಧಾನಸಭೆಯಲ್ಲಿ ಸಚಿವ ಕೃಷ್ಣಬೈರೇಗೌಡ ಸ್ಪಷ್ಟನೆ

೨. ಅಂತರ್‌ಜಾತಿ ವಿವಾಹಿತರ ರಕ್ಷಣೆಗೆ ವಿಧಾನಸಭೆಯಲ್ಲಿ ಇವ ನಮ್ಮವ ಇವ ನಮ್ಮವ ವಿಧೇಯಕ ಮಂಡನೆ

೩. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಡಿಜೆ ನಿಷೇಧಿಸಲು ಸರ್ಕಾರ ಚಿಂತನೆ

೪. ವಾಣಿಜ್ಯ ಅಡುಗೆ ಅನಿಲ ಕೊರತೆ ; ಒಂದು ವಾರ ಸಹಕಾರ ನೀಡುವಂತೆ ಹೋಟೆಲ್ ಉದ್ಯಮಿಗಳಿಗೆ ಸಚಿವ ಕೆ.ಎಚ್.ಮುನಿಯಪ್ಪ ಮನವಿ

೫. ಬಾಗಲಕೋಟೆ ಉಪಚುನಾವಣೆ ; ಕಾಂಗ್ರೆಸ್ ಅಭ್ಯರ್ಥಿ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಡೆಸಿದ ಸಂಧಾನ ಯಶಸ್ವಿ

***************

ಕರ್ನಾಟಕ ಲೋಕಸೇವಾ ಆಯೋಗ ಇತ್ತೀಚೆ ನಡೆಸಿದ ಗೆಜೆಟೆಡ್ ಪ್ರೋಬೆಷನರಿ ಹುದ್ದೆಗಳ ನೇಮಕಾತಿಗಾಗಿ ನಡೆದಿರುವ ಆಯ್ಕೆ ಪ್ರಕ್ರಿಯೆಯಲ್ಲಿ ಕೇಳಿ ಬಂದಿರುವ ಆರೋಪಗಳು ಆಧಾರ ರಹಿತ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಸ್ಪಷ್ಟನೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಸದನಕ್ಕೆ ಉತ್ತರ ನೀಡಿದ ಸಚಿವರು, ನೇಮಕಾತಿ ಪ್ರಕ್ರಿಯೆಯ ಸುಧಾರಣೆಗಾಗಿ ಅಧ್ಯಯನ ನಡೆಸಲು ಸದನ ಸಮಿತಿ ರಚಿಸಲಾಗುವುದು ಎಂದು ಘೋಷಿಸಿದ್ದಾರೆ.

ಇತ್ತಿಚೆಗೆ ನಡೆದ ಪರೀಕ್ಷೆಯಲ್ಲಿ ಒಂದೇ ಕೊಠಡಿಯಲ್ಲಿದ್ದ ೧೧ ಮಂದಿ ಸಂದರ್ಶನಕ್ಕೆ ಆಯ್ಕೆಯಾಗಿರುವ ಬಗ್ಗೆ ಆರೋಪಗಳು ಕೇಳಿಬಂದಿತ್ತು. ಪರೀಕ್ಷಾ ಕೊಠಡಿಯ ಸಿಸಿಟಿವಿ ದೃಶ್ಯಾವಳಿಗಳು ಕೆಪಿಎಸ್ಸಿಯಲ್ಲಿ ಲಭ್ಯವಿದ್ದು, ಅವುಗಳನ್ನು ಪರಿಶೀಲನೆ ನಡೆಸಿದಾಗ ಅನುಮಾನ ಪಡುವಂತಹ ಯಾವುದೇ ಬೆಳವಣಿಗೆಗಳು ಕಂಡುಬಂದಿಲ್ಲ ಎಂದು ಹೇಳಿದ್ದಾರೆ. ಜೊತೆಗೆ ಒಂದೇ

ಕುಟುಂಬದ ನಾಲ್ಕೈದು ಮಂದಿ ಸಂದರ್ಶನಕ್ಕೆ ಆಯ್ಕೆಯಾಗಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಲಾಗಿತ್ತು. ಇವರು ಯಾರೂ ಒಂದೇ ಕುಟುಂಬಕ್ಕೆ ಸೇರಿದವರಲ್ಲ. ಬೇರೆ ಬೇರೆ ಜಿಲ್ಲೆಯವರು ಎಂದು ಸಚಿವರು ಸದನದಲ್ಲಿ ಸ್ಪಷ್ಟನೆ ನೀಡಿದ್ದಾರೆ.

***************

ರಾಜ್ಯ ಸರ್ಕಾರವು ಅಂತರ್ಜಾತಿ ವಿವಾಹಿತರನ್ನು ರಕ್ಷಿಸಲು "ಇವ ನಮ್ಮವ ಇವ ನಮ್ಮವ" ವಿಧೇಯಕ ಮಂಡಿಸಿದೆ. ವಿಧಾನಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ವಿಧೇಯಕ ಮಂಡಿಸಿ ಮಾತನಾಡಿ, ಈ ಕಾಯ್ದೆಯು ಅಂತರ್ಜಾತಿ ವಿವಾಹದ ಜೋಡಿಗಳ ವಿರುದ್ಧ ಸಾಮಾಜಿಕ ಬಹಿಷ್ಕಾರ, ಆರ್ಥಿಕ ಕಿರುಕುಳ ಮತ್ತು ಮರ್ಯಾದೆಗೇಡು ಹತ್ಯೆಯಂತಹ ಘಟನೆಗಳನ್ನು ತಡೆಯುವ ಗುರಿ ಹೊಂದಿದೆ ಎಂದು ತಿಳಿಸಿದರು.

ಇದು ಜಾತಿ ಶ್ರೇಣೀಕರಣದ ಹೆಸರಿನಲ್ಲಿ ನಡೆಯುವ ಹಿಂಸೆಯನ್ನು ನಿಷೇಧಿಸಿ, ವಿವಾಹಿತರಿಗೆ ಕಾನೂನು ರಕ್ಷಣೆ ನೀಡಲಿದೆ. ಅಂತರ್ಜಾತಿ ವಿವಾಹಗಳಿಗೆ ಹೆಚ್ಚಿನ ಮಾನ್ಯತೆ ನೀಡಲಿದೆ.

***************

ಸಾಂಸ್ಕೃತಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಅಬ್ಬರದ ಸಂಗೀತ ಪ್ರಸಾರಕ್ಕೆ ತಡೆ ನೀಡುವ ನಿಟ್ಟಿನಲ್ಲಿ ಡಿ.ಜೆ. ನಿಷೇಧಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ವಿಧಾನಸಭೆಗೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ಎಸ್. ತಂಗಡಗಿ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ವಿಚಾರ ಪ್ರಸ್ತಾಪಿಸಿ ಎಲ್ಲ ಆಚರಣೆಗಳಲ್ಲೂ ಡಿ.ಜೆ. ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ ಎಂದು ಸರ್ಕಾರದ ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಶಿವರಾಜ್ ತಂಗಡಗಿ ವಿರೋಧಪಕ್ಷಗಳ ಸಹಕಾರ ಕೋರಿದರು. ಎಲ್ಲರೂ ಸಹಕರಿಸಿದರೆ ಡಿ.ಜೆ. ನಿಷೇಧಿಸುವುದಾಗಿ ಸ್ಪಷ್ಟಪಡಿಸಿದರು. ಈ ವೇಳೆ ಬಿಜೆಪಿ ಹಿರಿಯ ಶಾಸಕ ಎಸ್.ಸುರೇಶ್‌ಕುಮಾರ್ ಮಾತನಾಡಿ, ಡಿ.ಜೆಯಿಂದ ಆಗುತ್ತಿರುವ ಶಬ್ದಮಾಲಿನ್ಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಸಲಹೆ ನೀಡಿದ್ದಾರೆ.

***************

ವಿಧಾನಪರಿಷತ್‌ನಲ್ಲಿಂದು ರಾಜ್ಯದಲ್ಲಿ ಉಂಟಾಗಿರುವ ಅಡುಗೆ ಅನಿಲ ಕೊರತೆ ಕೆಲ ಹೊತ್ತು ಸದನವನ್ನು ನಗೆಗಡಲಿನಲ್ಲಿ ತೇಲಿಸಿತು. ಕಾಂಗ್ರೆಸ್ ಸದಸ್ಯ ಐವಾನ್ ಡಿಸೋಜಾ ವಿಷಯ ಪ್ರಸ್ತಾಪಿಸಿ ಅಡುಗೆ ಅನಿಲ ಕೊರತೆಯಿಂದ ಊಟ-ತಿಂಡಿ ಸಕಾಲಕ್ಕೆ ಸಿಗುತ್ತಿಲ್ಲ ಎಂದು ನೋವು ತೋಡಿಕೊಂಡರು.

ಈ ವೇಳೆ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ದಯವಿಟ್ಟು ಅವರಿಗೆ ಇಡ್ಲಿ-ವಡಾ ಕೊಡಿ ಎಂದು ಹಾಸ್ಯ ಚಟಾಕಿ ಹಾರಿಸಿದರು. ಬಳಿಕ, ಅಡುಗೆ ಅನಿಲ ಕೊರತೆ ಕುರಿತಂತೆ ಮೇಲ್ಮನೆಗೆ ಮಾಹಿತಿ ನೀಡಿದ ಆಹಾರ ಸಚಿವ ಕೆ.ಎಚ್.ಮುನಿಯಪ್ಪ ನಿರ್ಬಂಧಗಳು ಮತ್ತು ಪೂರೈಕೆ ಸಮಸ್ಯೆಗಳಿಂದಾಗಿ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಕೈಗಾರಿಕೆಗಳಿಗೆ ಸೀಮಿತ ಸಂಖ್ಯೆಯ ವಾಣಿಜ್ಯ ಅಡುಗೆ ಅನಿಲ ಸಿಲಿಂಡರ್ ಮಾತ್ರ ಪೂರೈಸಬಹುದು ಎಂದು ತಿಳಿಸಿದರು.

ಒಂದು ವಾರ ಸಹಕಾರ ನೀಡುವಂತೆ ಹೋಟೆಲ್ ಉದ್ಯಮಿಗಳಿಗೆ ಮನವಿ ಮಾಡಿದರು.

***************

ಮಹಾನಗರ ಪಾಲಿಕೆಗಳು, ನಗರಸಭೆಗಳು ಮತ್ತು ಇತರೆ ಪಟ್ಟಣ ಪ್ರದೇಶಗಳಲ್ಲಿನ ಪಾರಂಪರಿಕ ಕಟ್ಟಡಗಳ ಗೋಡೆಗಳು ಹಾಗೂ ಸುತ್ತಮುತ್ತ ವಾಣಿಜ್ಯ ಜಾಹೀರಾತುಗಳ ಪ್ರದರ್ಶನವನ್ನು ನಿಷೇಧಿಸಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಘೋಷಿಸಿದ್ದಾರೆ.

ವಿಧಾನಸಭೆಯಿಂದ ಅಂಗೀಕೃತಗೊಂಡ ಕರ್ನಾಟಕ ಪೌರನಿಗಮಗಳ ಅಧಿನಿಯಮ ೧೯೭೬ ಮತ್ತು ಕರ್ನಾಟಕ ಪೌರಸಭೆಗಳ ಅಧಿನಿಯಮ ೧೯೬೪ ಕ್ಕೆ ತಿದ್ದುಪಡಿ ಮಸೂದೆ  ಮಂಡಿಸಿ ಮಾತನಾಡಿದ ಅವರು, ಕಳೆದ ಏಳೆಂಟು ವರ್ಷಗಳಿಂದ ರಾಜ್ಯಾದ್ಯಂತ ಅನಧಿಕೃತ ಜಾಹೀರಾತುಗಳನ್ನು ಪ್ರದರ್ಶಿಸಲಾಗುತ್ತಿದೆ. ಇದಕ್ಕೆ ಸ್ಥಳೀಯ ಸಂಸ್ಥೆಗಳಿಗೆ ಯಾವುದೇ ರೀತಿಯ ಶುಲ್ಕ ಅಥವಾ ತೆರಿಗೆಯನ್ನು ಪಾವತಿಸುತ್ತಿಲ್ಲ. ಹೀಗಾಗಿ ನೂರಾರು ಕೋಟಿ ರೂಪಾಯಿಗಳ ಆದಾಯ ಖೋತಾವಾಗಿದೆ ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಅನಧಿಕೃತ ಜಾಹೀರಾತುಗಳನ್ನು ನಿಯಂತ್ರಣ ಮಾಡಬೇಕೆಂಬ ಉದ್ದೇಶದಿಂದ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಆದಾಯ ತಂದುಕೊಡುವ ಉದ್ದೇಶದಿಂದ ಈಗಿರುವ ಕಾನೂನಿಗೆ ತಿದ್ದುಪಡಿ ತರಲೆಂದು ಮಸೂದೆ ಮಂಡಿಸಲಾಗಿದೆ ಎಂದು ಹೇಳಿದ್ದಾರೆ.

***************

ಬಾಗಲಕೋಟೆ ಉಪಚುನಾವಣೆ ಟಿಕೆಟ್ ಹಂಚಿಕೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಾಜಿ ಶಾಸಕ ದಿವಂಗತ ಹೆಚ್.ವೈ.ಮೇಟಿ ಅವರ ಪುತ್ರರು ಹಾಗೂ ಪುತ್ರಿಯರೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸಿದರು.

ಕುಟುಂಬದಲ್ಲಿ ಓರ್ವರಿಗೆ ಟಿಕೆಟ್ ನೀಡುವ ಕುರಿತಂತೆ ಸಂಧಾನ ನಡೆಸುವಲ್ಲಿ ಮುಖ್ಯಮಂತ್ರಿ ಯಶಸ್ವಿಯಾಗಿದ್ದಾರೆ.

ಹೆಚ್.ವೈ.ಮೇಟಿ ನಿಧನದಿಂದಾಗಿ ತೆರವಾಗಿದ್ದ ಬಾಗಲಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಏಪ್ರಿಲ್ ೯ ರಂದು ಚುನಾವಣೆ ನಡೆಯಲಿದೆ.

***************

ಮುಂದಿನ  ಐದು ವರ್ಷಗಳಲ್ಲಿ ರಾಜ್ಯ ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದನೆಯನ್ನು ೨೫ ಸಾವಿರ ಮೆಗಾವ್ಯಾಟ್‌ಗೆ  ಹೆಚ್ಚಿಸುವ ಗುರಿ ಹೊಂದಿದೆ ಎಂದು ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ತಿಳಿಸಿದ್ದಾರೆ.

ನವೀಕರಿಸಬಹುದಾದ ಇಂಧನದ ಭವಿಷ್ಯವನ್ನು ಭಾರತವು ಹೇಗೆ ಜವಾಬ್ದಾರಿಯುತವಾಗಿಸಬಹುದು ಎಂಬ ವಿಷಯ ಕುರಿತ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಅವರು, ಇದನ್ನು ಸಾಧಿಸಲು ಸರ್ಕಾರ ಸಾಕಷ್ಟು ಪೂರಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ ಎಂದು ಹೇಳಿದ್ದಾರೆ.

ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಭೂಮಿ ಸ್ವಾಧೀನಪಡಿಸಿಕೊಳ್ಳುವ ಸಂದರ್ಭದಲ್ಲಿ ಜನರಿಂದ ಸಾಕಷ್ಟು ವಿರೋಧಗಳು ಬರುತ್ತಿವೆ. ಉದ್ಯಮ ವಲಯದಿಂದ ಬಂದಿರುವ ಪ್ರತಿಕ್ರಿಯೆಗಳನ್ನು ಆಧರಿಸಿ ಭೂಸ್ವಾಧೀನ ವಿಚಾರದಲ್ಲಿ ಸರಳೀಕರಣ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

***************

ಕೊಡಗು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷ ನಿಯಂತ್ರಣಕ್ಕೆ ತೋಡಲಾಗಿರುವ ಆನೆ ಕಂದಕ ಮತ್ತು ಅಳವಡಿಸಿರುವ ತೂಗು ಸೌರಬೇಲಿಯ ಸಮರ್ಪಕ ನಿರ್ವಹಣೆ ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದಲ್ಲಿಂದು ಶಾಸಕರಾದ ಎ.ಎಸ್. ಪೊನ್ನಣ್ಣ, ಡಾ.ಮಂಥರ್ ಗೌಡ ಮತ್ತು ದರ್ಶನ್ ಧ್ರುವನಾರಾಯಣ್ ಅವರೊಂದಿಗೆ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಅವರು, ಕೊಡಗಿನಲ್ಲಿ ವನ್ಯಜೀವಿಗಳಿಂದ ಅಮೂಲ್ಯ ಜೀವ ಹಾನಿ ಆಗುತ್ತಿರುವುದು  ಆತಂಕದ ವಿಷಯವಾಗಿದೆ ಎಂದು ತಿಳಿಸಿದ್ದಾರೆ.

ಹಾಲಿ ಇರುವ ೪೨೨ ಕಿಲೋಮೀಟರ್ ಆನೆ ಕಂದಕ ಮತ್ತು ೫೪೪ ಕಿಲೋಮೀಟರ್ ತೂಗು ಸೌರಬೇಲಿಯ ಸಮರ್ಪಕ ದುರಸ್ತಿ ಕಾರ್ಯವನ್ನು  ಒಂದು ತಿಂಗಳೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದ್ದಾರೆ.

***************

ಕಳೆದ ಹಲವಾರು ವರ್ಷಗಳಿಂದ ಅನುಪಮ ಸೇವೆ ಸಲ್ಲಿಸುತ್ತಾ ಬಂದಿರುವ ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಈಗ ಮತ್ತೊಂದು ಗರಿ ಬಂದಿದೆ.

ಬಿಎಂಸಿಆರ್‌ಐಯ ಮೈಕ್ರೋ ಬಯೋಲಜಿ ವಿಭಾಗ ನಾಲ್ಕು ವರ್ಷಗಳ ಅವಧಿಗೆ ಪರೀಕ್ಷೆ ಮತ್ತು ಮಾಪನಾಂಕ ನಿರ್ಣಯ ಪ್ರಯೋಗಾಲಯಗಳ ರಾಷ್ಟ್ರೀಯ ಮಾನ್ಯತೆ ಮಂಡಳಿ ಮಾನ್ಯತೆ ಪಡೆಯುವಲ್ಲಿ ಯಶಸ್ವಿಯಾಗಿದೆ.

೨೦೧೬ರಲ್ಲಿ ಮೂರು ಪರೀಕ್ಷೆಗಳನ್ನು ಪೂರೈಸುತ್ತಿದ್ದ ವಿಭಾಗ ಈಗ ೨೦೨೬ರಲ್ಲಿ ೬೬ ಪರೀಕ್ಷೆಗಳನ್ನು ನಡೆಸುತ್ತಿದೆ. ಮೆಡಿಕಲ್ ಟೆಸ್ಟಿಂಗ್ ವಿಭಾಗದಲ್ಲಿ ಸರ್ಟಿಫಿಕೇಟ್ ನೀಡಲಾಗಿದ್ದು, ೨೦೩೦ರವರೆಗೆ ಇದು ಮಾನ್ಯವಾಗಿರಲಿದೆ ಎಂದು ವೈದ್ಯಕೀಯ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

***************

ಬೆಳಗಾವಿ ಮಹಾನಗರ ಪಾಲಿಕೆಯ ೨೪ನೇ ಅವಧಿಯ ಮಹಾಪೌರರಾಗಿ ಪ್ರೀತಿ ವಿನಾಯಕ ಹಾಗೂ ಉಪ ಮಹಾಪೌರರಾಗಿ ಹಣಮಂತ ಕೊಂಗಾಲಿ ಅವರು ಆಯ್ಕೆಯಾಗಿದ್ದಾರೆ.

ಮೇಯರ್ ಸ್ಥಾನ ಸಾಮಾನ್ಯ ಮಹಿಳೆ ಹಾಗೂ ಉಪಮೇಯರ್ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಮಹಾನಗರ ಪಾಲಿಕೆ ಪರಿಷತ್ ಸಭಾಂಗಣದಲ್ಲಿ ಇಂದು ನಡೆದ ಚುನಾವಣೆಯಲ್ಲಿ ಬೆಳಗಾವಿ ಪ್ರಾದೇಶಿಕ ಆಯುಕ್ತೆ ಕೆ. ಎಮ್. ಜಾನಕಿ ಅಭ್ಯರ್ಥಿಗಳ ಆಯ್ಕೆಯನ್ನು ಪ್ರಕಟಿಸಿದರು.

***************

ಹಾಸನ ಜಿಲ್ಲೆಯಲ್ಲಿ ಭೂ-ಮಾಫಿಯಾ ಹಾಗೂ ಅಕ್ರಮ ಕಲ್ಲುಗಣಿಗಾರಿಕೆ ವ್ಯಾಪಕವಾಗಿ ನಡೆಯುತ್ತಿದ್ದು, ಇದರ ವಿರುದ್ಧ ತಕ್ಷಣ ವಿಶೇಷ ತನಿಖಾ ತಂಡ ರಚಿಸಬೇಕು ಎಂದು ಮಾಜಿ ಸಚಿವ ಎಚ್‌ಡಿ. ರೇವಣ್ಣ ಒತ್ತಾಯಿಸಿದ್ದಾರೆ.

ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಮಾನ ನಿಲ್ದಾಣ ಮತ್ತು ಐಐಟಿ ಯೋಜನೆಗಳಿಗೆ ಮೀಸಲಾದ ಭೂಮಿಯನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಜಿಲ್ಲಾಧಿಕಾರಿಯ ಕಾರ್ಯವೈಖರಿಯ ವಿರುದ್ಧವು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಸಂಕ್ಷಿಪ್ತ ಸುದ್ದಿಗಳು

೧.	ಗದಗ ನಗರದ ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಿಗಳ ಸಂಸ್ಥೆಯಲ್ಲಿ ಇಂದು ವಿಪತ್ತು ನಿರ್ವಹಣಾ ಪ್ರಾತ್ಯಕ್ಷಿಕೆ ನಡೆಯಿತು. ಕಮಲೇಶ್ ಸಿಂಗ್  ನೇತೃತ್ವದ ಎನ್‌ಡಿಆರ್‌ಎಫ್ ತಂಡ ಭಾಗವಹಿಸಿ ಪ್ರಾತ್ಯಕ್ಷಿಕೆ ನಡೆಸಿಕೊಟ್ಟಿತು.

೨.	ನಾಳೆ ಪರಾಭವ ನಾಮ ಸಂವತ್ಸರದ ಯುಗಾದಿ ಸ್ವಾಗತಕ್ಕೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಭರದ ಸಿದ್ಧತೆಗಳು ನಡೆಯುತ್ತಿವೆ. ಮಾರುಕಟ್ಟೆ ಪ್ರದೇಶದಲ್ಲಿ ಸಾರ್ವಜನಿಕರು ಹಬ್ಬಕ್ಕೆ ಬೇಕಾದ ಅಗತ್ಯ ವಸ್ತುಗಳ ಖರೀದಿಯಲ್ಲಿ ತೊಡಗಿದ್ದಾರೆ.

೩.	ಕಾರವಾರ ತಾಲೂಕಿನ ದೇವಭಾಗ ಕಡಲತೀರದಲ್ಲಿ ಬುಧವಾರ ಸಂರಕ್ಷಿಸಲ್ಪಟ್ಟ, ಕಡಲಾಮೆ ಮೊಟ್ಟೆಯಿಂದ ಹೊರ ಬಂದ ೧೬೩ ಮರಿಗಳನ್ನು ಸಮುದ್ರಕ್ಕೆ ಇಂದು ಯಶಸ್ವಿಯಾಗಿ ಬಿಡುಗಡೆ ಮಾಡಲಾಯಿತು. ಈ ಭಾಗವನ್ನು ಕಡಲಾಮೆಯ ಸಂರಕ್ಷಣಾ ಕೇಂದ್ರವನ್ನಾಗಿ ಗುರುತಿಸಲಾಗಿದೆ.

೪.	ರಾಜ್ಯದಲ್ಲಿ ೪೦ ಲಕ್ಷದಷ್ಟು ವಿಶ್ವ ಕರ್ಮ ಸಮಾಜದ ಜನಸಂಖ್ಯೆ ಇದ್ದು ಪರಿಶಿಷ್ಟ ವರ್ಗಕ್ಕೆ ಸೇರ್ಪಡೆಗೊಳಿಸಲು ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯಾಧ್ಯಕ್ಷ ಕೆ.ಪಿ.ನಂಜುಂಡಿ ರಾಮನಗರದಲ್ಲಿ ತಿಳಿಸಿದ್ದಾರೆ.

೫.	ಖಾದ್ಯತೈಲ ಉತ್ಪಾದನೆಗೆ ಮಂಡ್ಯ ಜಿಲ್ಲೆಯ ಕೃಷಿ ಭೂಮಿ ಯೋಗ್ಯವಾಗಿದೆ ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ಶ್ರೀನಿಶ್ಚಲಾನಂದನಾಥಸ್ವಾಮೀಜಿ ಹೇಳಿದ್ದಾರೆ.

೬.	ರಾಷ್ಟ್ರೀಯ ಹೆದ್ದಾರಿ-೨೭೫ ಹಾದುಹೋಗುವ ಕೊಡಗು ಜಿಲ್ಲೆಯ   ಸಂಪಾಜೆಯಿಂದ ಕುಶಾಲನಗರ ಕಾವೇರಿ ನದಿ ಸೇತುವೆವರೆವಿಗೂ ಅನಧಿಕೃತ ಜಾಹಿರಾತು ಫಲಕಗಳನ್ನು ಮತ್ತು ವ್ಯಾಪಾರಿಗಳು ಹಣ್ಣಿನ ಅಂಗಡಿಗಳನ್ನು ತೆರೆಯಲು ಅವಕಾಶವಿಲ್ಲ ಎಂದು ರಾಷ್ಟ್ರೀಯ ಹೆದ್ದಾರಿ ಉಪವಿಭಾಗದ ಸಹಾಯಕ  ಕಾರ್ಯಪಾಲಕ ಇಂಜಿನಯರ್ ತಿಳಿಸಿದ್ದಾರೆ.

*******ಮುಕ್ತಾಯ********